Akashvani: Bangalore
National News In Kannada
15.11.2025 : 7.35AM

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

15.11.2025 : 7.35AM

**********

**ಮುಖ್ಯಾಂಶಗಳು :**

1. ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟಕ್ಕೆ ಭಾರೀ ಬಹುಮತ; ಮಹಾಘಟಬಂದನ್ ಮೈತ್ರಿಕೂಟಕ್ಕೆ ನಿರಾಸೆ
2. ಬಿಹಾರನಲ್ಲಿನ ಗೆಲುವು ಅಭಿವೃದ್ಧಿ, ಸಾಮಾಜಿಕ ನ್ಯಾಯಕ್ಕೆ ದೊರೆತ ಜನಾದೇಶ - ಪ್ರಧಾನಿ ನರೇಂದ್ರ ಮೋದಿ
3. ದೇಶಾದ್ಯಂತ ಇಂದು ಭಗವಾನ್ ಬಿರ್ಸಾ ಮುಂಡಾ ಸ್ಮರಣಾರ್ಥ ಜನ್‌ಜಾತಿಯ ಗೌರವ ದಿವಸ್ ಆಚರಣೆ
4. ಕೊಮಾಮೊತೊ ಮಾಸ್ಟರ್ಸ್ ಜಪಾನ್ ಬ್ಯಾಡ್ಮಿಂಟನ್ ಟೂರ್ನಿ; ಸೆಮಿಫೈನಲ್ ಪ್ರವೇಶಿಸಿದ ಭಾರತದ ಲಕ್ಷ್ಯ ಸೇನ್
5. ಟೆಸ್ಟ್ ಕ್ರಿಕೆಟ್; ಮೊದಲ ಪಂದ್ಯದ ಎರಡನೇ ದಿನದಾಟದಲ್ಲಿಂದು ದಕ್ಷಿಣ ಆಫ್ರಿಕಾ ವಿರುದ್ಧ ಇನ್ನಿಂಗ್ಸ್ ಮುಂದುವರಿಸಲಿರುವ ಭಾರತ

*********

ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಆಡಳಿತಾರೂಢ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ-ಎನ್‌ಡಿಎ ಭರ್ಜರಿ ಬಹುಮತ ಗಳಿಸಿದ್ದು, ೨೪೩ ಸದಸ್ಯ ಬಲದ ವಿಧಾನಸಭೆಯಲ್ಲಿ ೨೦೨ ಸ್ಥಾನಗಳನ್ನು ಗೆದ್ದಿದೆ. ಎಲ್ಲಾ ಕ್ಷೇತ್ರಗಳ ಫಲಿತಾಂಶಗಳನ್ನು ಚುನಾವಣಾ ಆಯೋಗ ನಿನ್ನೆ ರಾತ್ರಿ ಪ್ರಕಟಿಸಿದೆ. ರಾಜ್ಯದಲ್ಲಿ ಸರ್ಕಾರ ರಚಿಸಲು ಒಂದು ಪಕ್ಷ ಅಥವಾ ಮೈತ್ರಿಕೂಟಕ್ಕೆ ೧೨೨ ಸ್ಥಾನಗಳು ಬೇಕಾಗಿದ್ದವು. ಬಿಜೆಪಿ ೮೯ ಸ್ಥಾನಗಳನ್ನು ಗೆದ್ದು ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿತು. ಅದರ ಮಿತ್ರ ಪಕ್ಷವಾದ ಮುಖ್ಯಮಂತ್ರಿ ನಿತೀಶ್ ಕುಮಾರ್ ನೇತೃತ್ವದ ಜೆಡಿಯು ೮೫ ಸ್ಥಾನಗಳನ್ನು ಗೆದ್ದರೆ, ಕೇಂದ್ರ ಸಚಿವ ಚಿರಾಗ್ ಪಾಸ್ವಾನ್ ನೇತೃತ್ವದ ಲೋಕ ಜನಶಕ್ತಿ ಪಕ್ಷ - ರಾಮ್ ವಿಲಾಸ್, ೧೯ ಸ್ಥಾನಗಳನ್ನು ಗೆದ್ದಿದೆ. ಮಾಜಿ ಮುಖ್ಯಮಂತ್ರಿ ಜಿತನ್ ರಾಮ್ ಮಾಂಝಿ ನೇತೃತ್ವದ ಹಿಂದೂಸ್ತಾನಿ ಅವಾಮ್ ಮೋರ್ಚಾ-ಜಾತ್ಯತೀತ ಐದು ಸ್ಥಾನಗಳನ್ನು ಗೆದ್ದರೆ, ಉಪೇಂದ್ರ ಕುಶ್ವಾಹ ನೇತೃತ್ವದ ರಾಷ್ಟ್ರೀಯ ಲೋಕ ಮೋರ್ಚಾ ನಾಲ್ಕು

ಸ್ಥಾನಗಳನ್ನು ಗೆದ್ದಿದೆ. ಉಪಮುಖ್ಯಮಂತ್ರಿಗಳಾದ ಸಾಮ್ರಾಟ್ ಚೌಧರಿ ಮತ್ತು ವಿಜಯ್ ಕುಮಾರ್ ಸಿನ್ಹಾ, ಮತ್ತು ರಾಜ್ಯ ಸಚಿವರಾದ ಪ್ರೇಮ್ ಕುಮಾರ್, ಮಹೇಶ್ವರ್ ಹಜಾರಿ ಮತ್ತು ಸಂಜಯ್ ಸರೋಗಿ ಮತ್ತು ಬಿಜೆಪಿಯ ಮೈಥಿಲಿ ಠಾಕೂರ್ ಎನ್‌ಡಿಎ ಮೈತ್ರಿಕೂಟದಿಂದ ಗೆದ್ದ ಪ್ರಮುಖರಲ್ಲಿ ಸೇರಿದ್ದಾರೆ. ರಾಷ್ಟ್ರೀಯ ಜನತಾ ದಳ -ಆರ್‌ಜೆಡಿ ನೇತೃತ್ವದ ಮಹಾಘಟಬಂಧನ್ ಕೇವಲ ೩೫ ಸ್ಥಾನಗಳನ್ನು ಗೆಲ್ಲುವಲ್ಲಿ ಯಶಸ್ವಿಯಾಯಿತು. ಆರ್‌ಜೆಡಿ ೨೫ ಸ್ಥಾನಗಳನ್ನು ಗೆದ್ದರೆ, ಕಾಂಗ್ರೆಸ್ ಆರು ಸ್ಥಾನಗಳಲ್ಲಿ ಜಯ ಸಾಧಿಸಿತು. ಕಮ್ಯುನಿಸ್ಟ್ ಪಾರ್ಟಿ ಆಫ್ ಇಂಡಿಯಾ -ಮಾರ್ಕ್ಸ್‌ವಾದಿ-ಲೆನಿನಿಸ್ಟ್ ಲಿಬರೇಶನ್ ಎರಡು ಸ್ಥಾನಗಳನ್ನು ಮತ್ತು ಸಿಪಿಐ(ಎಂ) ಮತ್ತು ಇಂಡಿಯನ್ ಇನ್ಕ್ಲೂಸಿವ್ ಪಾರ್ಟಿ ತಲಾ ಒಂದು ಸ್ಥಾನವನ್ನು ಗಳಿಸಿದವು. ಹೈದರಾಬಾದ್ ಸಂಸದ ಅಸದುದ್ದೀನ್ ಓವೈಸಿ ನೇತೃತ್ವದ ಎಐಎಂಐಎಂ ಐದು ಸ್ಥಾನಗಳನ್ನು ಗೆದ್ದರೆ, ಬಹುಜನ ಸಮಾಜ ಪಕ್ಷ -ಬಿಎಸ್‌ಪಿ ಒಂದು ಸ್ಥಾನವನ್ನು ಗಳಿಸಿತು. ಆರ್‌ಜೆಡಿ ನಾಯಕ ಮತ್ತು ಮಹಾಘಟಬಂಧನ್‌ನ ಮುಖ್ಯಮಂತ್ರಿ ಅಭ್ಯರ್ಥಿ ತೇಜಸ್ವಿ ಯಾದವ್ ಮತ್ತು ಸಿಪಿಐ-ಎಂಎಲ್ ಲಿಬರೇಶನ್‌ನ ಸಂದೀಪ್ ಸೌರವ್ ವಿರೋಧ ಪಕ್ಷದ ಪಾಳಯದಿಂದ ಗೆದ್ದ ಪ್ರಮುಖರಲ್ಲಿ ಸೇರಿದ್ದಾರೆ. ಬಿಹಾರ ಚುನಾವಣೆಯಲ್ಲಿ ಪ್ರಶಾಂತ್ ಕಿಶೋರ್ ಅವರ ಜನ್ ಸುರಾಜ್ ಪಕ್ಷವು ಯಾವುದೇ ಸ್ಥಾನಗಳನ್ನು ಪಡೆಯುವಲ್ಲಿ ವಿಫಲವಾಗಿದೆ. ಈ ತಿಂಗಳ ೬ ಮತ್ತು ೧೧ ರಂದು ನಡೆದ ಎರಡು ಹಂತದ ಚುನಾವಣೆಯಲ್ಲಿ ರಾಜ್ಯದಲ್ಲಿ ಶೇಕಡ ೬೭.೧೩ ರಷ್ಟು ಐತಿಹಾಸಿಕ ಮತದಾನ ಪ್ರಮಾಣ ದಾಖಲಾಗಿದೆ.

*********

ಏಳು ರಾಜ್ಯಗಳ ೮ ವಿಧಾನಸಭಾ ಕ್ಷೇತ್ರಗಳಿಗೆ ನಡೆದ ಉಪಚುನಾವಣೆಯಲ್ಲಿ ಕಾಂಗ್ರೆಸ್ ಹಾಗೂ ಬಿಜೆಪಿ ಪಕ್ಷಗಳು ತಲಾ ಎರಡು ಸ್ಥಾನಗಳನ್ನು ಗೆದ್ದಿವೆ. ಆಮ್ ಆದ್ಮಿ ಪಕ್ಷ, ಪಿಡಿಪಿ, ಜೆಜೆಎಂ ಮತ್ತು ಮಿಜೊ ನ್ಯಾಷನಲ್ ಫ್ರಂಟ್ ತಲಾ ಒಂದು ಸ್ಥಾನವನ್ನು ಗೆದ್ದಿವೆ. ಜಮ್ಮು-ಕಾಶ್ಮೀರದ ನಗ್ರೊಟಾ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿ ದೆವ್ಯಾನಿ ರಾಣಾ ಜಯಗಳಿಸಿದ್ದಾರೆ. ಒಡಿಶಾದಲ್ಲಿ ನೌಪಾದ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಜೈ ಡೋಲಕಿಯಾ ತಮ್ಮ ಸಮೀಪದ ಕಾಂಗ್ರೆಸ್ ಅಭ್ಯರ್ಥಿ ಘಾಸಿ ರಾಮ್ ಮಾಜಿ ವಿರುದ್ಧ ೮೩ ಸಾವಿರಕ್ಕೂ ಅಧಿಕ ಮತಗಳ ಅಂತರದಲ್ಲಿ ಜಯಗಳಿಸಿದ್ದಾರೆ. ತೆಲಂಗಾಣದ ಜುಬ್ಲಿ ಹಿಲ್ಸ್ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿ ನವೀನ್ ಯಾದವ್, ರಾಜಸ್ಥಾನದ ಅಂತಾ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿ ಪ್ರಮೋದ್ ಜೈನ್ ಭಾಯಾ, ಪಂಜಾಬ್‌ನ ತರನ್‌ತರನ್ ಕ್ಷೇತ್ರದಿಂದ ಆಮ್ ಆದ್ಮಿ ಪಕ್ಷದ ಹರ್ಮೀತ್ ಸಿಂಗ್ ಸಂಧು, ಮಿಜೋರಾಂನ ದಂಪಾ ಕ್ಷೇತ್ರದಿಂದ ಮಿಜೊ ನ್ಯಾಷನಲ್ ಫ್ರಂಟ್ ಅಭ್ಯರ್ಥಿ ಡಾ.ಆರ್.ಲಾಲ್ ತಾಂಗ್ಲಿಯಾನ ಗೆಲುವು ಸಾಧಿಸಿದ್ದಾರೆ. ಜಾರ್ಖಂಡ್‌ನಲ್ಲಿ ಜೆ.ಜೆ.ಎಂ ಪಕ್ಷದ ಅಭ್ಯರ್ಥಿ ಘಡ್ಸಿಲಾ ಕ್ಷೇತ್ರದಲ್ಲಿ ಜಯ ಸಾಧಿಸಿದ್ದಾರೆ.

*********

ಬಿಹಾರ ವಿಧಾನಸಭಾ ಚುನಾವಣೆಯ ಗೆಲುವು ಅಭಿವೃದ್ಧಿಯ ರಾಜಕೀಯಕ್ಕೆ ಮತ್ತು ಸ್ವಜನಪಕ್ಷಪಾತದ ರಾಜಕೀಯದ ತಿರಸ್ಕಾರಕ್ಕೆ ದೊರೆತ ಜನಾದೇಶವಾಗಿದೆ ಎಂದು ಹಿರಿಯ ಬಿಜೆಪಿ ನಾಯಕ ಮತ್ತು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ನಿನ್ನೆ ಸಂಜೆ ನವದೆಹಲಿಯ ಬಿಜೆಪಿ ಪ್ರಧಾನ ಕಚೇರಿಯಲ್ಲಿ ಪಕ್ಷದ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ ಅವರು, ಇದು ಬಿಹಾರದ ಮಹಿಳೆಯರ ಗೆಲುವಾಗಿದೆ ದೇಶದ ಚುನಾವಣಾ ಪ್ರಕ್ರಿಯೆಯಲ್ಲಿ ನಂಬಿಕೆಯನ್ನು ಬಲಪಡಿಸಿದ ಪ್ರಜಾಪ್ರಭುತ್ವದ ಗೆಲುವು ಇದಾಗಿದೆ ಎಂದರು. ದಾಖಲೆಯ ಸಂಖ್ಯೆಯಲ್ಲಿ ಮತ ಚಲಾಯಿಸುವ ಮೂಲಕ ಪ್ರಜಾಪ್ರಭುತ್ವ ಮತ್ತು ಚುನಾವಣಾ ಆಯೋಗದ ಮೇಲಿನ ನಂಬಿಕೆಯನ್ನು ಮರಳಿ ಪಡೆದಿದ್ದಕ್ಕಾಗಿ ಜನರನ್ನು ಅಭಿನಂದಿಸಿದರು. ಮತದಾರರ ಪಟ್ಟಿಗಳ ಪರಿಷ್ಕರಣೆಗೆ ಮತದಾರರು ಭಾರಿ ಬೆಂಬಲ ನೀಡಿದ್ದಾರೆ. ರಾಷ್ಟ್ರವು ಈಗ ನಿಜವಾದ ಸಾಮಾಜಿಕ ನ್ಯಾಯಕ್ಕಾಗಿ ಮತ ಚಲಾಯಿಸುತ್ತಿದೆ ಪ್ರತಿ ಕುಟುಂಬಕ್ಕೂ ಅವಕಾಶ, ಗೌರವ ಮತ್ತು ಸಮಾನತೆಯನ್ನು ನೀಡುವ ದೃಷ್ಟಿಕೋನದಡಿ, ಓಲೈಕೆಗೆ ಅವಕಾಶವಿಲ್ಲದ ಮತ್ತು ಎಲ್ಲರ ಮೇಲೆ ಗಮನ ಕೇಂದ್ರೀಕರಿಸಿರುವ ಸಮಾಜ ಇದಾಗಿದೆ ಎಂದು ಪ್ರಧಾನಿ ಹೇಳಿದರು.

ಧ್ವನಿ : ಪ್ರಧಾನಿ ನರೇಂದ್ರ ಮೋದಿ (   ಸೆಕೆಂಡ್ಸ್)

*********

ಸ್ವಾತಂತ್ರ್ಯ ಹೋರಾಟಗಾರ ಮತ್ತು ಬುಡಕಟ್ಟು ನಾಯಕ ಭಗವಾನ್ ಬಿರ್ಸಾ ಮುಂಡಾ ಅವರ ಜನ್ಮ ದಿನಾಚರಣೆಯ ಸ್ಮರಣಾರ್ಥ ಇಂದು ದೇಶಾದ್ಯಂತ ಜನ್‌ಜಾತಿಯ ಗೌರವ ದಿವಸ್ ಆಚರಿಸಲಾಗುತ್ತಿದೆ. ಬುಡಕಟ್ಟು ಇತಿಹಾಸವನ್ನು ಜೀವಂತವಾಗಿಡುವ ಮಹತ್ವವನ್ನು ಗುರುತಿಸಿ ಕೇಂದ್ರ ಸರ್ಕಾರ ನವೆಂಬರ್ ೧೫ ಅನ್ನು ಜನಜಾತಿಯ ಗೌರವ ದಿವಸ್ ಎಂದು ಆಚರಿಸುತ್ತಿದೆ. ಈ ಆಚರಣೆಯನ್ನು ಜನಜಾತಿಯ ಗೌರವ ಸಪ್ತಾಹದ ಭಾಗವಾಗಿ ಬುಡಕಟ್ಟು ಸಮುದಾಯದ ಮಹಾನ್ ವ್ಯಕ್ತಿಗಳ  ಪರಂಪರೆಯನ್ನು ಮುನ್ನೆಲೆಗೆ ತರುವ ಸಾಂಸ್ಕೃತಿಕ ಕಾರ್ಯಕ್ರಮಗಳು, ಪ್ರದರ್ಶನಗಳು ಮತ್ತು ಶೈಕ್ಷಣಿಕ ಚಟುವಟಿಕೆಗಳೊಂದಿಗೆ ಆಚರಿಸಲಾಗುತ್ತಿದೆ. ಬುಡಕಟ್ಟು ಸ್ವಾತಂತ್ರ್ಯ ಹೋರಾಟಗಾರರಿಗೆ ಮೀಸಲಾಗಿರುವ ವಸ್ತುಸಂಗ್ರಹಾಲಯಗಳು ಮತ್ತು ಸ್ಮಾರಕಗಳ ಅಭಿವೃದ್ಧಿಗೆ ಸರ್ಕಾರ ನಿರಂತರವಾಗಿ ಒತ್ತು ನೀಡಿದೆ. ಹತ್ತು ರಾಜ್ಯಗಳಲ್ಲಿ ಹನ್ನೊಂದು ವಸ್ತುಸಂಗ್ರಹಾಲಯಗಳಿಗೆ ಅನುಮೋದನೆ ನೀಡಲಾಗಿದೆ, ರಾಂಚಿಯಲ್ಲಿರುವ ಭಗವಾನ್ ಬಿರ್ಸಾ ಮುಂಡಾ ಸ್ಮಾರಕ ಉದ್ಯಾನವನ-ವಸ್ತುಸಂಗ್ರಹಾಲಯ ಸೇರಿದಂತೆ ಮೂರು ವಸ್ತುಸಂಗ್ರಹಾಲಯಗಳು ಈಗಾಗಲೇ ಉದ್ಘಾಟನೆಗೊಂಡಿವೆ. ಅದೇ ರೀತಿ, ರಾಯ್‌ಪುರದಲ್ಲಿರುವ ಬುಡಕಟ್ಟು ಸ್ವಾತಂತ್ರ್ಯ ಹೋರಾಟಗಾರರ ಕುರಿತಾದ ಡಿಜಿಟಲ್ ವಸ್ತುಸಂಗ್ರಹಾಲಯಕ್ಕೆ ವೀರ್ ನಾರಾಯಣ್ ಸಿಂಗ್ ಅವರ ಹೆಸರಿಡಲಾಗಿದೆ. ಇದಲ್ಲದೆ, ರಾಣಿ ಕಮಲಾಪತಿ ರೈಲು ನಿಲ್ದಾಣ,

ತಾಂತ್ಯ ಭಿಲ್ ವಿಶ್ವವಿದ್ಯಾಲಯ ಮತ್ತು ಅಲ್ಲೂರಿ ಸೀತಾರಾಮ ರಾಜು ಮತ್ತು ಬಿರ್ಸಾ ಮುಂಡಾ ಅವರ ಪ್ರತಿಮೆಗಳಂತಹ ಸಾರ್ವಜನಿಕ ಸ್ಥಳಗಳು ದೇಶಾದ್ಯಂತ ಬುಡಕಟ್ಟು ಪರಂಪರೆಯನ್ನು ಪ್ರಚುರ ಪಡಿಸುವ ನಿರಂತರ ಪ್ರಯತ್ನವನ್ನು ಪ್ರತಿಬಿಂಬಿಸುತ್ತವೆ. ಆದಿ ಶೌರ್ಯ ಇ-ಪುಸ್ತಕ ಮತ್ತು ಬುಡಕಟ್ಟು ನಾಯಕರ ಕುರಿತಾದ ಅಮರ ಚಿತ್ರ ಕಥಾ ಸಂಕಲನ ಸೇರಿದಂತೆ ಬುಡಕಟ್ಟು ವೀರರ ಕಥೆಗಳನ್ನು ನಿರೂಪಿಸುವ ಪುಸ್ತಕಗಳು, ಕಾಮಿಕ್ಸ್ ಮತ್ತು ಡಿಜಿಟಲ್ ಸಾಮಗ್ರಿಗಳ ಪ್ರಕಟಣೆಗಳನ್ನು ಕೇಂದ್ರ ಸರ್ಕಾರ ಕೈಗೊಂಡಿದೆ.  ಪ್ರಧಾನಿ ನರೇಂದ್ರ ಮೋದಿ ಅವರು ಬಿರ್ಸಾ ಮುಂಡಾ, ಪೈಕಾ ದಂಗೆ ಮತ್ತು ರಾಣಿ ಗೈಡಿನ್ಲಿಯು ಅವರಿಗೆ ಸಮರ್ಪಿತವಾದ ಸ್ಮರಣಾರ್ಥ ನಾಣ್ಯಗಳು ಮತ್ತು ಅಂಚೆಚೀಟಿಗಳನ್ನು ಬಿಡುಗಡೆ ಮಾಡಿದ್ದಾರೆ. ಇಂದು, ೪೨ ಸಚಿವಾಲಯಗಳು ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ಕ್ರಿಯಾ ಯೋಜನೆಯ ಮೂಲಕ ಬುಡಕಟ್ಟು ಕಲ್ಯಾಣಕ್ಕೆ ಸಕ್ರಿಯವಾಗಿ ಕೊಡುಗೆ ನೀಡುತ್ತಿವೆ.

*********

ಪ್ರಧಾನಿ ನರೇಂದ್ರ ಮೋದಿ ಇಂದು ಗುಜರಾತ್‌ಗೆ ಒಂದು ದಿನದ ಭೇಟಿ ನೀಡಲಿದ್ದಾರೆ. ತಮ್ಮ ಭೇಟಿಯ ಸಮಯದಲ್ಲಿ, ಅವರು, ನರ್ಮದಾ ಜಿಲ್ಲೆಯ ದೇಡಿಯಾಪದದಲ್ಲಿ ಜನಜಾತಿಯ ಗೌರವ್ ದಿವಸ್ ಅಂಗವಾಗಿ ನಡೆಯಲಿರುವ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಬುಡಕಟ್ಟು ಸಮುದಾಯಗಳನ್ನು ಉನ್ನತೀಕರಿಸುವ ಮತ್ತು ಪ್ರದೇಶದ ಗ್ರಾಮೀಣ ಮತ್ತು ದೂರದ ಪ್ರದೇಶಗಳಲ್ಲಿ ಮೂಲಸೌಕರ್ಯವನ್ನು ಸುಧಾರಿಸುವ ಗುರಿಯನ್ನು ಹೊಂದಿರುವ ೯ ಸಾವಿರದ ೭೦೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಪ್ರಧಾನಿ ಉದ್ಘಾಟಿಸಿ, ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಈ ಯೋಜನೆಗಳು ಮೂಲಸೌಕರ್ಯ, ಆರೋಗ್ಯ, ಶಿಕ್ಷಣ ಮತ್ತು ಪರಂಪರೆಯ ಮೇಲೆ ಕೇಂದ್ರೀಕರಿಸುತ್ತವೆ ಮತ್ತು ಬುಡಕಟ್ಟು ಸಬಲೀಕರಣಕ್ಕೆ ಒತ್ತು ನೀಡುತ್ತವೆ. ಪ್ರಧಾನ ಮಂತ್ರಿ ಜನಜಾತಿಯ ಆದಿವಾಸಿ ನ್ಯಾಯ ಮಹಾ ಅಭಿಯಾನ - ಪಿಎಂ-ಜನ್‌ಮನ್ ಮತ್ತು ಧರ್ತಿ ಆಬಾ ಜನಜಾತಿಯ ಗ್ರಾಮ ಉತ್ಕರ್ಷ್ ಅಭಿಯಾನ ಅಡಿಯಲ್ಲಿ ನಿರ್ಮಿಸಲಾದ ಒಂದು ಲಕ್ಷ ಮನೆಗಳ ಗೃಹ ಪ್ರವೇಶ ಕಾರ್ಯಕ್ರಮದಲ್ಲಿ ಪ್ರಧಾನಿ ಭಾಗವಹಿಸಲಿದ್ದಾರೆ. ಬುಡಕಟ್ಟು ಪ್ರದೇಶಗಳಲ್ಲಿ ಸಂಪರ್ಕವನ್ನು ಹೆಚ್ಚಿಸಲು ೭೪೮ ಕಿಲೋಮೀಟರ್ ಹೊಸ ರಸ್ತೆಗಳು ಮತ್ತು ಸಮುದಾಯ ಕೇಂದ್ರಗಳಾಗಿ ಕಾರ್ಯನಿರ್ವಹಿಸಲು ಗ್ರಾಮ ಉತ್ಕರ್ಷ್ ಅಭಿಯಾನ ದಡಿಯಲ್ಲಿ ಪ್ರಧಾನಿ, ೧೪ ಬುಡಕಟ್ಟು ಬಹು-ಮಾರುಕಟ್ಟೆ ಕೇಂದ್ರಗಳ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಭಾರತದ ಅತ್ಯಂತ ಮಹತ್ವಾಕಾಂಕ್ಷೆಯ ಮೂಲಸೌಕರ್ಯ ಯೋಜನೆಗಳಲ್ಲಿ ಒಂದಾದ ಮುಂಬೈ-ಅಹಮದಾಬಾದ್ ಹೈ-ಸ್ಪೀಡ್ ರೈಲು ಕಾರಿಡಾರ್‌ನ ಪ್ರಗತಿಯನ್ನು

ಪರಿಶೀಲಿಸಲು ಪ್ರಧಾನಿ ಇಂದು ಬೆಳಿಗ್ಗೆ ಸೂರತ್‌ನಲ್ಲಿ ನಿರ್ಮಾಣ ಹಂತದಲ್ಲಿರುವ ಬುಲೆಟ್ ರೈಲು ನಿಲ್ದಾಣಕ್ಕೂ ಭೇಟಿ ನೀಡಲಿದ್ದಾರೆ.

*********

ಆಂಧ್ರಪ್ರದೇಶದ ವಿಶಾಖಪಟ್ಟಣದಲ್ಲಿ ನಿನ್ನೆ ೩೦ನೇ ಸಿಐಐ ಪಾಲುದಾರಿಕೆ ಶೃಂಗಸಭೆ ೨೦೨೫ಅನ್ನು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃ?ನ್ ಉದ್ಘಾಟಿಸಿದರು. ಎರಡು ದಿನಗಳ ಈ ಕಾರ್ಯಕ್ರಮವನ್ನು ಕೇಂದ್ರ ಸರ್ಕಾರ ಮತ್ತು ಆಂಧ್ರಪ್ರದೇಶ ಸರ್ಕಾರದ ಸಹಭಾಗಿತ್ವದಲ್ಲಿ ಭಾರತೀಯ ಕೈಗಾರಿಕಾ ಒಕ್ಕೂಟ ಆಯೋಜಿಸಿದೆ. ಈ ವೇಳೆ ಮಾತನಾಡಿದ ಉಪರಾಷ್ಟ್ರಪತಿ, ಭಾರತವು ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯಾಗುವ ಹಾದಿಯಲ್ಲಿದೆ ಮತ್ತು ಪ್ರಮುಖ ನವೋದ್ಯಮ ಕೇಂದ್ರವಾಗಿ ಬೆಳೆಯುತ್ತಿದೆ. ಡಿಜಿಟಲ್ ಮೂಲಸೌಕರ್ಯ ಮತ್ತು ಇ-ಆಡಳಿತವು ವೇಗವಾದ ಸೇವೆಗಳನ್ನು ನೀಡುತ್ತಿದೆ ಮತ್ತು ತಂತ್ರಜ್ಞಾನ ಆಧಾರಿತ ಆರ್ಥಿಕತೆಯನ್ನು ನಿರ್ಮಿಸಲು ಸಹಾಯ ಮಾಡುತ್ತಿದೆ ಎಂದು ಹೇಳಿದ್ದಾರೆ. ಕೇಂದ್ರ ಮತ್ತು ರಾಜ್ಯ ಎರಡೂ ಸಾಮರಸ್ಯದಿಂದ ಕಾರ್ಯನಿರ್ವಹಿಸುತ್ತಿವೆ ಮತ್ತು ಜಾಗತಿಕ ಹೂಡಿಕೆದಾರರು ಭಾರತ ಮತ್ತು ಆಂಧ್ರಪ್ರದೇಶದಲ್ಲಿ ಹೂಡಿಕೆ ಮಾಡುವ ಅವಕಾಶವನ್ನು ಬಳಸಿಕೊಳ್ಳುವಂತೆ ಅವರು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಮಾತನಾಡಿದ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್, ಭಾರತವು ತಂತ್ರಜ್ಞಾನವನ್ನು ಎಲ್ಲರಿಗೂ ಕೈಗೆಟಕುವಂತೆ ಮಾಡುತ್ತಿದೆ ಮತ್ತು ಜಾಗತಿಕ ಒಪ್ಪಂದಗಳ ಮೂಲಕ ಮುಕ್ತ ವ್ಯಾಪಾರವನ್ನು ಬಲಪಡಿಸುತ್ತಿದೆ ಎಂದು ಹೇಳಿದರು.

*********

ಭಾರತದ ಖ್ಯಾತ ಯುವ ಶೆಟ್ಲರ್ ಲಕ್ಷ್ಯಸೇನ್, ಕುಮಾಮೊತೊ ಮಾಸ್ಟರ್ಸ್ ಜಪಾನ್ ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಸೆಮಿಫೈನಲ್ ಪ್ರವೇಶಿಸಿದ್ದಾರೆ. ನಿನ್ನೆ ನಡೆದ ಕ್ವಾರ್ಟರ್‌ಫೈನಲ್‌ನಲ್ಲಿ ಲಕ್ಷ್ಯಸೇನ್, ಮಾಜಿ ವಿಶ್ವ ಚಾಂಪಿಯನ್ ಸಿಂಗಾಪುರದ ಲೋಹ್ ಕೀನ್ ಯೆವ್ ವಿರುದ್ಧ ೨೧-೧೩, ೨೧-೧೭ ಸೆಟ್‌ಗಳ ಅಂತರದಲ್ಲಿ ಗೆಲುವು ದಾಖಲಿಸಿದರು. ಇಂದು ಸೆಮಿಫೈನಲ್ ಪಂದ್ಯದಲ್ಲಿ ಅವರು, ವಿಶ್ವ ೧೩ನೇ ಶ್ರೇಯಾಂಕಿತ ಜಪಾನ್‌ನ ಕೆಂತಾ ನಿಶಿಮೊತೊ ವಿರುದ್ಧ ಫೈನಲ್‌ನಲ್ಲಿ ಸ್ಥಾನ ಪಡೆಯಲು ಸೆಣಸಾಟ ನಡೆಸಲಿದ್ದಾರೆ. ಈ ಪಂದ್ಯಾವಳಿಯ ಡಬಲ್ಸ್ ಹಾಗೂ ಮಹಿಳಾ ಸಿಂಗಲ್ಸ್ ವಿಭಾಗದ ಪಂದ್ಯಗಳಲ್ಲಿ ಭಾರತ ಈಗಾಗಲೇ ತನ್ನ ಅಭಿಯಾನವನ್ನು ಕೊನೆಗೊಳಿಸಿದ್ದು, ಪ್ರಸ್ತುತ ಪಂದ್ಯಾವಳಿಯಲ್ಲಿ ಲಕ್ಷ್ಯಸೇನ್ ಏಕೈಕ ಭಾರತೀಯ ಆಟಗಾರರಾಗಿದ್ದಾರೆ.

*********

ಕೋಲ್ಕೊತಾದ ಈಡನ್ ಗಾರ್ಡನ್ಸ್ ಕ್ರೀಡಾಂಗಣದಲ್ಲಿ ನಿನ್ನೆ ಆರಂಭವಾದ ಭಾರತ ಮತ್ತು ಪ್ರವಾಸಿ ದಕ್ಷಿಣ ಆಫ್ರಿಕಾ ತಂಡಗಳ ನಡುವಿನ ಎರಡು ಟೆಸ್ಟ್ ಕ್ರಿಕೆಟ್ ಸರಣಿಯ ಮೊದಲ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ತಂಡ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ೧೫೯ ರನ್‌ಗಳಿಗೆ ತನ್ನೆಲ್ಲಾ ವಿಕೆಟ್ ಕಳೆದುಕೊಂಡಿತು. ನಂತರ, ಮೊದಲ ಇನ್ನಿಂಗ್ಸ್ ಅನ್ನು ಆರಂಭಿಸಿದ ಭಾರತ ಮೊದಲ ದಿನದಾಟದ ಅಂತ್ಯದ ವೇಳೆಗೆ ೧ ವಿಕೆಟ್ ನಷ್ಟಕ್ಕೆ ೩೭ ರನ್ ಗಳಿಸಿತ್ತು. ಪ್ರಸ್ತುತ ೧೩ ರನ್ ಗಳಿಸಿರುವ ಕೆ.ಎಲ್.ರಾಹುಲ್ ಹಾಗೂ ೬ ರನ್‌ಗಳೊಂದಿಗೆ ವಾಷಿಂಗ್ಟನ್ ಸುಂದರ್ ಕಣದಲ್ಲಿದ್ದು, ಆಟ ಮುಂದುವರೆಸಲಿದ್ದಾರೆ. ಎರಡನೇ ದಿನದಾಟ ಇಂದು ಬೆಳಗ್ಗೆ ೯.೩೦ಕ್ಕೆ ಆರಂಭವಾಗಲಿದೆ.

*********

ಈಜಿಪ್ಟ್‌ನ ಕೈರೋದಲ್ಲಿ ನಡೆಯುತ್ತಿರುವ ಐಎಸ್‌ಎಸ್‌ಎಫ್ ವಿಶ್ವ ರೈಫಲ್ ಮತ್ತು ಪಿಸ್ತೂಲ್ ಚಾಂಪಿಯನ್‌ಶಿಪ್‌ನ ಮಹಿಳಾ ೨೫ ಮೀಟರ್ ಪಿಸ್ತೂಲ್ ಸ್ಪರ್ಧೆಯಲ್ಲಿ ಮಾಜಿ ಏಷ್ಯಾ ಚಾಂಪಿಯನ್ ಭಾರತದ ಇಶಾ ಸಿಂಗ್ ಕಂಚಿನ ಪದಕ ತಮ್ಮದಾಗಿಸಿಕೊಂಡಿದ್ದಾರೆ. ಹಿರಿಯರ ವಿಶ್ವ ಚಾಂಪಿಯನ್‌ಶಿಪ್‌ನಲ್ಲಿ ಇದು ಅವರ ಮೊದಲ ವೈಯಕ್ತಿಕ ಪದಕವಾಗಿದೆ. ಅಂತಿಮ ಪಂದ್ಯದಲ್ಲಿ ಇಶಾ ೩೦ ಅಂಕಗಳನ್ನು ಗಳಿಸಿದರು. ಒಟ್ಟಾರೆಯಾಗಿ ಭಾರತ ೩ ಚಿನ್ನ, ೫ ಬೆಳ್ಳಿ ಮತ್ತು ೪ ಕಂಚಿನ ಪದಕಗಳೊಂದಿಗೆ ಪದಕ ಪಟ್ಟಿಯಲ್ಲಿ ೩ನೇ ಸ್ಥಾನದಲ್ಲಿದೆ. ಚೀನಾ ೧೦ ಚಿನ್ನದ ಪದಕಗಳೊಂದಿಗೆ ಅಗ್ರಸ್ಥಾನದಲ್ಲಿದ್ದರೆ, ದಕ್ಷಿಣ ಕೊರಿಯಾ ೬ ಚಿನ್ನದ ಪದಕಗಳೊಂದಿಗೆ ೨ನೇ ಸ್ಥಾನದಲ್ಲಿದೆ.

*****END****